ಕರ್ನಾಟಕ ಸರ್ಕಾರ

ದಿನಾಂಕ: 9-10-2017

# ನಿಗಧಿತ ಗಡುವಿನೊಳಗೆ ಬೆಂಗಳೂರು ಮಹಾನಗರದ ರಸ್ತೆಗಳನ್ನು ಗುಂಡಿಮುಕ್ತ ಮಾಡದಿದ್ದರೆ ಅಧಿಕಾರಿ ಹಾಗೂ ಗುತ್ತಿಗೆದಾರರ ಮೇಲೆ ಕ್ರಮ

- ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಂಗಳೂರು ಅಕ್ಟೋಬರ್ 9:** ನಿಗಧಿತ ಗಡುವಿನೊಳಗೆ ಬೆಂಗಳೂರು ಮಹಾನಗರದ ರಸ್ತೆಗಳನ್ನು ಗುಂಡಿಮುಕ್ತ ಮಾಡದಿದ್ದರೆ ಸಂಬಂಧಿಸಿದ ಬಿಬಿಎಂಪಿ ಎಂಜಿನಿಯರುಗಳು ಹಾಗೂ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರನ್ನು ಹೊಣೆಗಾರರನ್ನಾಗಿ ಮಾಡಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಕೆ ನೀಡಿದ್ದಾರೆ.

ಭಾರಿ ಮಳೆಯಿಂದಾಗಿ ನಗರದಲ್ಲಿ ಆಗಿರುವ ಅನಾಹುತ ಮತ್ತು ಕೈಗೊಂಡಿರುವ ಪರಿಹಾರ ಕ್ರಮಗಳ ಬಗ್ಗೆ ಚರ್ಚಿಸಲು ಗೃಹ ಕಚೇರಿ ಕೃಷ್ಣಾದಲ್ಲಿ ಕರೆದಿದ್ದ ಬಿಬಿಎಂಪಿ, ಬಿಡಿಎ, ಬೆಸ್ಕಾಂ ಮತ್ತು ಮೆಟ್ರೋ ರೈಲು ನಿಗಮದ ಅಧಿಕಾರಿಗಳ ಸಭೆ ಬಳಿಕ ಮುಖ್ಯಮಂತ್ರಿಯವರು ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು.

ನಗರದಲ್ಲಿ ಈ ಬಾರಿ ವಾಡಿಕೆಗಿಂತ ಎರಡು, ಮೂರು ಪಟ್ಟು ಹೆಚ್ಚು ಮಳೆಯಾಗಿದೆ. ಆಗಸ್ಟ ಮತ್ತು ಸೆಪ್ಟೆಂಬರ್ ತಿಂಗಳಲ್ಲಿ ಮಳೆ ನಿರೀಕ್ಷೆಗೂ ಮೀರಿ ಭಾರಿ ಪ್ರಮಾಣದಲ್ಲಿ ಆಗಿರುವುದರಿಂದ ಹೆಚ್ಚು ಅನಾಹುತ ಸಂಭವಿಸಿದೆ ಎಂದು ಹೇಳಿದರು.

42 ದಿನಗಳ ಕಾಲ ನಗರದಲ್ಲಿ ಸತತವಾಗಿ ಮಳೆಯಾಗಿದೆ. ಹೀಗಾಗಿ ರಸ್ತೆಗಳಲ್ಲಿ ಗುಂಡಿಗಳು ಬಿದ್ದು ವಾಹನ ಸವಾರರಿಗೆ ತೊಂದರೆಯಾಗಿದೆ. ಮಳೆಯಲ್ಲೇ ಗುಂಡಿಗಳನ್ನು ಮುಚ್ಚಿದರೆ ವಾರ, ಹದಿನೈದು ದಿನದಲ್ಲಿ ಕಿತ್ತು ಹೋಗುತ್ತವೆ. ಜೊತೆಗೆ ಸತತವಾಗಿ ಮಳೆ ಬಂದ ಕಾರಣ ಗುಂಡಿಗಳನ್ನು ಮುಚ್ಚುವ ಕಾರ್ಯ ಸ್ಥಗಿತಗೊಂಡಿತ್ತು ಎಂದು ತಿಳಿಸಿದರು.

ಗುಂಡಿಗಳಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿರುವುದರಿಂದ ಮತ್ತು ಅಪಘಾತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಮುಂದಿನ 15 ದಿನಗಳಲ್ಲಿ ಬೆಂಗಳೂರಿನ ಎಲ್ಲ ರಸ್ತೆಗಳನ್ನು ಗುಂಡಿಮುಕ್ತ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಮಳೆ ಬಂದರೂ ಕೋಲ್ಡ್ ಮಿಕ್ಸ್ ಅಳವಡಿಸಿ ಗುಂಡಿಗಳನ್ನು ಮುಚ್ಚಲು ಸೂಚಿಸಿದೆ. ಮಳೆಯ ನಡುವೆ ಕೋಲ್ಡ್ ಮಿಕ್ಸ್ ಮೂಲಕ ಗುಂಡಿಗಳನ್ನು ಮುಚ್ಚಿದರೆ 5-6ತಿಂಗಳು ಬಾಳಿಕೆ ಬರುತ್ತದೆ. ಮಳೆ ಬಿಟ್ಟು ಮಾಡಿದರೆ ಒಂದರಿಂದ ಎರಡು ವರ್ಷಗಳವರೆಗೆ ಬಾಳಿಕೆ ಬರುತ್ತದೆ ಎಂದರು.

ಗುಂಡಿಗಳನ್ನು ಮುಚ್ಚಿಸುವ ಜವಾಬ್ದಾರಿಯನ್ನು ಬಿಬಿಎಂಪಿ ಮುಖ್ಯ ಎಂಜಿನಿಯರುಗಳಿಗೆ ವಹಿಸಲಾಗಿದೆ. ಒಂದು ವೇಳೆ ನಿಗಧಿತ ಅವಧಿಯಲ್ಲಿ ಗುಂಡಿಗಳನ್ನು ಮುಚ್ಚದಿದ್ದರೆ ಆಯಾ ವಾರ್ಡ್‌ನ ಪಾಲಿಕೆ ಸದಸ್ಯರು, ಶಾಸಕರು ನೀಡುವ ದೂರು ಆಧರಿಸಿ ಎಂಜಿನಿಯರುಗಳ ವಿರುದ್ಧ ಕ್ರಮ ಜರುಗಿಸಲಾಗುವುದು.

198 ವಾರ್ಡ್‌ಗಳ ಸದಸ್ಯರ ಸಭೆ ಕರೆದು ಆಯಾ ವಾರ್ಡ್‌ಗಳಲ್ಲಿ ಇರುವ ಗುಂಡಿಗಳ ಬಗ್ಗೆ ಮಾಹಿತಿ ಪಡೆದು ಮುಚ್ಚಿಸುವಂತೆ ಮೇಯರ್ ಅವರಿಗೆ ಸೂಚಿಸಿದ್ದೇನೆ.

ಬೆಂಗಳೂರು ನಗರದಲ್ಲಿ ಬಿಜೆಪಿಯ 12 ಶಾಸಕರಿದ್ದಾರೆ. ಪಾಲಿಕೆಯಲ್ಲಿ 100 ಸದಸ್ಯರು ಆ ಪಕ್ಷಕ್ಕೆ ಸೇರಿದವರಾಗಿದ್ದಾರೆ. ಗುಂಡಿಗಳನ್ನು ಮುಚ್ಚಿಸುವ ವಿಚಾರದಲ್ಲಿ ಅವರಿಗೂ ಜವಾಬ್ದಾರಿ ಇದೆಯಲ್ಲವೇ ? ಯಾವುದೇ ಕಾಮಗಾರಿ ನಡೆದರೂ ಅವರು ಮೇಲ್ವಿಚಾರಣೆ ಮಾಡಬೇಕು. ಕಾಮಗಾರಿಯ ಗುಣಮಟ್ಟದ ಬಗ್ಗೆ ಪರಿಶೀಲನೆ ನಡೆಸಬೇಕು. ಸುಮ್ಮನೆ ಸರ್ಕಾರವನ್ನು ಟೀಕೆ ಮಾಡುವುದಲ್ಲ ಎಂದು ಸಿಎಂ ಹೇಳಿದರು.

ಕೇವಲ ಗುಂಡಿ ಮುಚ್ಚುವುದಲ್ಲ. ಇಡೀ ರಸ್ತೆಯನ್ನು ಅಭಿವೃದ್ಧಿಪಡಿಸಿ ಎಂದು ಅಧಿಕಾರಿಗಳಿಗೆ ಆದೇಶಿಸಿದ್ದೇನೆ. ರಸ್ತೆಗಳಲ್ಲಿ ಗುಂಡಿಗಳು ಬೀಳುವುದನ್ನು ತಪ್ಪಿಸುವ ಸಲುವಾಗಿಯೇ ವೈಟ್ ಟಾಪಿಂಗ್‌ಗೆ ಸರ್ಕಾರ ಆದ್ಯತೆ ನೀಡುತ್ತಿದೆ. ಪ್ರಸ್ತುತ ಒಂದು ಸಾವಿರ ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಮುಖ ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ನಗರದಲ್ಲಿ 1,600 ಕಿ.ಮೀ. ರಸ್ತೆ ಇದ್ದು, ಮುಂದಿನ ದಿನಗಳಲ್ಲಿ ಎಲ್ಲ ರಸ್ತೆಗಳಲ್ಲಿಯೂ ವೈಟ್ ಟಾಪಿಂಗ್ ಆಗಲಿದೆ ಎಂದು ವಿವರಿಸಿದರು.

ವೈಟ್ ಟಾಪಿಂಗ್ ಮಾಡುವುದರಿಂದ ರಸ್ತೆಗಳು 30 ವರ್ಷದ ವರೆಗೆ ಬಾಳಿಕೆ ಬರುತ್ತದೆ. ಜೊತೆಗೆ ಗುತ್ತಿಗೆದಾರರು ಹತ್ತು ವರ್ಷ ನಿರ್ವಹಣೆ ಮಾಡುತ್ತಾರೆ. ಈ ಸಂಬಂಧ ಕ್ರಿಯಾ ಯೋಜನೆ ರೂಪಿಸಲು ಸೂಚಿಸಿದೆ ಎಂದು ಮುಖ್ಯಮಂತ್ರಿಯವರು ಹೇಳಿದರು.

ಎಲ್ಲ ವಾರ್ಡ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ 700 ಕೋಟಿ ರೂ.ಗಳನ್ನು ಒದಗಿಸಲು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಅದರಂತೆ ಹಳೆಯ ವಾರ್ಡ್‌ಗಳಿಗೆ ತಲಾ 2 ಮತ್ತು ಹೊಸದಾಗಿ ಸೇರಿರುವ ವಾರ್ಡ್‌ಗಳಿಗೆ ತಲಾ 3 ಕೋಟಿ ರೂ. ನಿಗಧಿ ಮಾಡಿದೆ.

ಇದರ ಜೊತೆಗೆ ಮಳೆ ನೀರು ಹರಿಯುವ ಚರಂಡಿಗಳ ಅಭಿವೃದ್ಧಿಗೂ ಕ್ರಮ ಕೈಗೊಳ್ಳಲಾಗಿದೆ. ನಗರದಲ್ಲಿ 845 ಕಿ.ಮೀ. ಮಾರ್ಗದ ಚರಂಡಿಗಳಿದ್ದು ಈಗ 345 ಕಿ.ಮೀ. ಮಾರ್ಗದ ರಾಜ ಕಾಲುವೆಗಳ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ. ಬಿಬಿಎಂಪಿಯಲ್ಲಿ ಬಿಜೆಪಿ ಆಡಳಿತ ಇದ್ದಾಗ ಇದರ ಬಗ್ಗೆ ತಲೆಕೆಡಿಸಿಕೊಳ್ಳಲಿಲ್ಲ. ಮುಂದಿನ ಎರಡು ವರ್ಷಗಳಲ್ಲಿ ಎಲ್ಲ ರಾಜಕಾಲುವೆಗಳ ಅಭಿವೃದ್ಧಿಯಾಗುತ್ತದೆ. ಇದರಿಂದ ಮಳೆ ನೀರು ತಗ್ಗು ಪ್ರದೇಶಗಳಿಗೆ ಹಾಗೂ ಅಲ್ಲಿಯ ಮನೆಗಳಿಗೆ ನುಗ್ಗುವ ಸಮಸ್ಯೆ ನಿವಾರಣೆಯಾಗುತ್ತದೆ.

ಚರಂಡಿಗಳಲ್ಲಿ ತುಂಬಿರುವ ಹೂಳು ತೆಗೆಯಲು 20 ಕೊಟಿ ರೂ. ವೆಚ್ಚದಲ್ಲಿ ಎರಡು ರೋಬೋಟಿಕ್ ಎಸ್ಕವೇಟರ್ ಖರೀದಿ ಮಾಡಲಾಗುತ್ತಿದೆ. ಈಗಾಗಲೇ ಮೂರು ಯಂತ್ರಗಳನ್ನು ಪಾಲಿಕೆ ಖರೀದಿ ಮಾಡಿದೆ.

ನಾಯಂಡಹಳ್ಳಿ ಸೇರಿದಂತೆ ಮೆಟ್ರೋ ರೈಲು ಕಾಮಗಾರಿ ನಡೆಯುತ್ತಿರುವ ಕಡೆಗಳಲ್ಲಿ ಎರಡೂ ಬದಿಯ ರಸ್ತೆಗಳನ್ನು ಕೂಡಲೇ ಅಭಿವೃದ್ಧಿಪಡಿಸಲು ಸೂಚನೆ ನೀಡಲಾಗಿದೆ.

ಮಳೆ ಅನಾಹುತ ಹೆಚ್ಚಾಗಿ ಸಂಭವಿಸುವ ಪ್ರದೇಶಗಳಲ್ಲಿ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು 117 ಕೋಟಿ ರೂ.ಗಳನ್ನು ಸರ್ಕಾರ ಪಾಲಿಕೆಗೆ ಒದಗಿಸುತ್ತಿದೆ. ಇದರಲ್ಲಿ ಎಚ್.ಎಸ್.ಆರ್.ಲೇ ಔಟ್‌ಗೆ 25, ಕೆ.ಆರ್.ಪುರಂಗೆ 30, ಕೋರಮಂಗಲಕ್ಕೆ 25 ಹಾಗೂ ಯಶವಂತಪುರ ವಿಧಾನಸಭೆ ಕ್ಷೇತ್ರಕ್ಕೆ 17 ಕೋಟಿ ರೂ.ಗಳನ್ನು ನಿಗಧಿ ಮಾಡಲಾಗಿದೆ.

ವಿವಿಧ ಕಾಮಗಾರಿ ನಿರ್ವಹಿಸಿರುವ ಗುತ್ತಿಗೆದಾರರ ಬಾಕಿ ಬಿಲ್ ಚುಕ್ತಾ ಮಾಡಲು 700 ಕೋಟಿ ರೂ.ಗಳ ಅಗತ್ಯವಿದೆ. ಆ ಹಣವನ್ನು ಬ್ಯಾಂಕ್‌ನಿಂದ ಸಾಲದ ರೂಪದಲ್ಲಿ ಪಡೆಯಲು ಪಾಲಿಕೆಗೆ ಅನುಮತಿ ನೀಡಲಾಗಿದೆ. ಪಡೆಯುವ ಸಾಲಕ್ಕೆ ಸರ್ಕಾರ ಖಾತರಿ ಒದಗಿಸುತ್ತದೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಎಂಟು ಸಾವಿರ ಕೋಟಿ ರೂ. ಮೊತ್ತದ ಬಿಲ್‌ಗಳು ಬಾಕಿ ಉಳಿದಿದ್ದವು. ನಾವು ಈಗ ಅದನ್ನು 700 ಕೋಟಿ ರೂ.ಗಳಿಗೆ ತಂದು ನಿಲ್ಲಿಸಿದ್ದೇವೆ.

ಕಟ್ಟಡಗಳ ಅವಶೇಷಗಳನ್ನು ನಗರದ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಸುರಿಯಲಾಗುತ್ತಿದೆ. ಅದರ ಬಗ್ಗೆಯೂ ನಿಗಾ ವಹಿಸಲು ಸೂಚಿಸಿದೆ. ಒಟ್ಟಾರೆ ನಗರವನ್ನು ಕಟ್ಟಡ ಅವಶೇಷ, ಗುಂಡಿ, ಕಸ ಮತ್ತು ಹೂಳು ಮುಕ್ತ ನಗರವನ್ನಾಗಿ ಮಾಡಲಾಗುವುದು. ಇದಕ್ಕಾಗಿ ಶೀಘ್ರದಲ್ಲೇ ಟಾಸ್ಕ್‌ಫೋರ್ಸ್ ರಚನೆಯಾಗಲಿದೆ ಎಂದು ಮುಖ್ಯಮಂತ್ರಿಯವರು ಸುದ್ದಿಗಾರರಿಗೆ ತಿಳಿಸಿದರು.

ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳುವ ಗುತ್ತಿಗೆದಾರರು ಒಪ್ಪಂದ ಪ್ರಕಾರ ಮೂರು ವರ್ಷ ನಿರ್ವಹಣೆ ಮಾಡಬೇಕು. ಇಲ್ಲದಿದ್ದರೆ ಅವರ ವಿರುದ್ಧ ಕ್ರಮ ಜರುಗಿಸುವುದರ ಜೊತೆಗೆ ಕಪ್ಪುಪಟ್ಟಿಗೆ ಸೇರಿಸಲಾಗುವುದು. ಇದರ ಜವಾಬ್ದಾರಿಯನ್ನು ಇಂಜಿನಿಯರುಗಳಿಗೆ ವಹಿಸಲಾಗಿದೆ ಎಂದರು.

ಬೆಸ್ಕಾಂ ಮತ್ತು ಜಲ ಮಂಡಳಿಯವರು ರಸ್ತೆ ಅಗೆದು ಹಾಗೆಯೇ ಬಿಡುವುದರಿಂದ ಸಮಸ್ಯೆಯಾಗುತ್ತಿದೆ. ಈ ಹಿನ್ನೆಲೆಯಲ್ಲೇ ಟೆಂಡರ್ ಶ್ಯೂರ್ ರಸ್ತೆಗಳು ಮತ್ತು ವೈಟ್ ಟಾಪಿಂಗ್‌ಗೆ ಆದ್ಯತೆ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

------------------------------